ಅ) ಸೂಕ್ತ ರೀತಿಯಲ್ಲಿ ಬೀದರ್ ಜಿಲ್ಲೆಯಲ್ಲಿ ಹನಿ ನೀರಾವರಿ ಅಳವಡಿಸಿದಂತಹ ಅರ್ಹ ರೈತರಿಗೆ ಸಹಾಯಧನವನ್ನು ತಕ್ಷಣ ವಿತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಇ) ಬೀದರ್ ಜಿಲ್ಲೆಯಲ್ಲಿ ಹನಿ ನೀರಾವರಿ ಸಹಾಯಧನ ವಿತರಣೆಯಲ್ಲಿ ಭಾರಿ ಅವ್ಯವಹಾರಗಳ ಹಿನ್ನೆಲೆಯಲ್ಲಿ ತಪ್ಪಿತಸ್ಥ ಅಧಿಕಾರಿಗಳ, ಹನಿ ನೀರಾವರಿ ಅಳವಡಿಸಿರುವ ಸಂಸ್ಥೆಗಳ ಹಾಗೂ ಬ್ಯಾಂಕು ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಸಿ. ಬೈರೇಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು) :

ಅ) 1997-98ನೇ ಸಾಲಿನ ಹನಿ ನೀರಾವರಿ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಯಲ್ಲಿನ ಅವ್ಯವಹಾರ ಪ್ರಕರಣವು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಕ್ರಮ ಬದ್ಧವಾಗಿ ಹನಿ ನೀರಾವರಿ ಅಳವಡಿಸಿದಂತಹ ಅರ್ಹ ರೈತರಿಗೆ ಸಹಾಯಧನವನ್ನು ನೀಡಲಾಗುತ್ತಿದೆ.

ಇ) ಹನಿ ನೀರಾವರಿ ಅಳವಡಣೆಯಲ್ಲಿ ಗಮನಿಸಿದಂತಹ ಆರೋಪಗಳ ಹಿನ್ನೆಲೆಯಲ್ಲಿ ತಪ್ಪಿತಸ್ಥ ಮೂರು ಇಲಾಖಾ ಅಧಿಕಾರಿಗಳ ಮೇಲೆ ಶಿಸ್ತಿನ ಕ್ರಮ ಕೈಗೊಂಡು ಅಮಾನತ್ತಿನಲ್ಲಿಡಲಾಗಿರುತ್ತದೆ. ದೋಷಪೂರಿತ ಹನಿ ನೀರಾವರಿ ಅಳವಡಿಸಿದ ಸಂಸ್ಥೆಯ ಕಾರ್ಯ ಚಟುವಟಿಕೆಯನ್ನು ಕೂಡಲೇ ಸ್ಥಗಿತಗೊಳಿಸಲಾಗಿದೆ ಮತ್ತು ಕಾರ್ಯಾಚರಣೆಯನ್ನು ರದ್ದುಪಡಿಸಿ ಕಪ್ಪುಪಟ್ಟಿಗೆ ಸೇರಿಸಲಾಗಿರುತ್ತದೆ. ಹಾಗೂ ಸಂಸ್ಥೆಯ ಮೇಲೆ ಕ್ರಿಮಿನಲ್ ಮೊಕದ್ದಮೆ ಹೂಡಲು ಕ್ರಮ ಕೈಗೊಳ್ಳಲಾಗಿರುತ್ತದೆ. ಸಂಬಂಧಿಸಿದ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್, ಬೀದರ್ ವತಿಯಿಂದ ಪೂರಕ ವಿವರಗಳನ್ನು ಪಡೆಯಲು ಹಾಗೂ ಜವಾಬ್ದಾರಿ ಗುರ್ತಿಸುವ ಪ್ರಯತ್ನಗಳು ಮುಂದುವರಿದಿವೆ. ನಿರ್ದೇಶನಾಲಯದ ವತಿಯಿಂದ ರಚಿಸಿದ ತನಿಖಾ ತಂಡದ ತನಿಖೆ ಕಾರ್ಯಗಳು ಪ್ರಾರಂಭವಾಗಿರುತ್ತದೆ.

ಬೀದರ್ ಜಿಲ್ಲೆಯ ತೋಟಗಾರಿಕೆ ಇಲಾಖೆಯಲ್ಲಿರುವ ಖಾಲಿ ಹುದ್ದೆಗಳು

1783 - ಡಾ|| ವಿಜಯಕುಮಾರ್ ಭೀಮಣ್ಣ ಖಂಡ್ರೆ (ಬಾಲ್ಕಿ) : ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಯಲ್ಲಿ ಎಷ್ಟು ಖಾಲಿ ಹುದ್ದೆಗಳಿವೆ ? (ಪೂರ್ಣ ವಿವರವನ್ನು ಒದಗಿಸುವುದು)

ಆ) ಸರ್ಕಾರವು ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡಿರುವ ಕ್ರಮ?

ಶ್ರೀ ಸಿ. ಬೈರೇಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು) :

ಅ) 15 ಹುದ್ದೆಗಳು ಇರುತ್ತವೆ.

ಅ) ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಬಡ್ತಿ/ನೇಮಕಾತಿ ಮೂಲಕ ತುಂಬಲು ಕ್ರಮ ಕೈಗೊಳ್ಳಲಾಗುವುದು.

ಪ್ರಕಟಣೆ

ಅಧ್ಯಕ್ಷರು : ವಿಧಾನಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ. ಕರ್ನಾಟಕ ವಿಧಾನಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 118ರ ಮೇರೆಗೆ ದಿನಾಂಕ 8.7.1999ರಂದು ವಿಧಾನಪರಿಷತ್ತು ಕರ್ನಾಟಕ ಅಂತರ್ಜಲ (ಕುಡಿಯುವ ನೀರಿನ ಮೂಲಗಳ ಸಂರಕ್ಷಣೆಗಾಗಿ ನಿಯಂತ್ರಣ) ವಿಧೇಯಕ, 1999ಅನ್ನು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಿದೆ ಎಂದು ಈ ಮೂಲಕ ತಿಳಿಸುತ್ತಿದ್ದೇನೆ ಹಾಗೂ ಈ ವಿಧಾನಸಭೆಯು ಇದಕ್ಕೆ ಸಹಮತವನ್ನು ನೀಡಬೇಕೆಂದು ಕೋರುತ್ತೇನೆ.

ಸಭೆಯ ಮುಂದಿಡಲಾದ ಕಾಗದಪತ್ರಗಳು

ಕಾರ್ಯದರ್ಶಿಯವರು : ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುತ್ತೇನೆ

1. ಕರ್ನಾಟಕ ನಿರಸನಗೊಳಿಸುವ ಮತ್ತು ತಿದ್ದುಪಡಿ ಮಾಡುವ ವಿಧೇಯಕ, 1999.
2. ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರ ಹಾಕುವ) (ಎರಡನೇ) ತಿದ್ದುಪಡಿ ವಿಧೇಯಕ, 1999.
3. ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 1999.
4. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ), ವಿಧೇಯಕ, 1999.
5. ಕನ್ನಡ ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕ, 1999.
6. ಶ್ರೀ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 1999.
7. ಕರ್ನಾಟಕ ಅಂತರ್ಜಲ (ಕುಡಿಯುವ ನೀರಿನ ಮೂಲಗಳ ಸಂರಕ್ಷಣೆಗಾಗಿ ನಿಯಂತ್ರಣ) ವಿಧೇಯಕ, 1999

ಅಧ್ಯಕ್ಷರು : ಮಂಡಿಸಲಾಯಿತು.

I. ಶ್ರೀ ಬಿ.ಎನ್. ಬಚ್ಚೇಗೌಡ (ಸಾರಿಗೆ ಸಚಿವರು) : ಶ್ರೀ ಜೆ.ಹೆಚ್. ಪಟೇಲ್ (ಮುಖ್ಯಮಂತ್ರಿ) ರವರ ಪರವಾಗಿ :

1958ರ ವಿದ್ಯುತ್ ಅಧಿನಿಯಮದ 69(5)(ಎ) ಪ್ರಕರಣದ ಮೇರೆಗೆ, 1997-98ನೇ ಸಾಲಿಗೆ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.